## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1020 |
| ಸದಸ್ಯರ ಹೆಸರು | : | ಶ್ರೀ ಅನಿಲ್ ಕುಮಾರ್ ಎಂ.ಎಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | 18.12.2024 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ಗ್ರಾಮಾಂತರ ಹಾರೋಹಳ್ಳಿ ತಾಲ್ಲೂಕು ಬನ್ನಿಗುಪ್ಪೆ ಗ್ರಾಮದ ಸರ್ವೆ ನಂ.234 ರಲ್ಲಿ 2 ಎಕರೆ ಸರ್ಕಾರಿ ಜಾಗವನ್ನು ಅಕ್ರಮವಾಗಿ ಖಾತೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಮನಗರ ಜಿಲ್ಲೆ, ಹಾರೋಹಳ್ಳಿ ತಾಲ್ಲೂಕು ಬನ್ನಿಕುಪ್ಪೆ ಗ್ರಾಮದ ಸ.ನಂ.234ರಲ್ಲಿ ಆಕಾರ್‌ಬಂದ್ ನಂತೆ 63-34 ಎ/ಗುಂ ವಿಸ್ತೀರ್ಣ ಇದ್ದು, ಪಹಣಿ ಕಾಲಂ 3 ರಲ್ಲಿ 63-34 ಎ/ಗುಂ ಇರುತ್ತದೆ. ಸದರಿ ವಿಸ್ತೀರ್ಣದಲ್ಲಿ 22-35 ಎ/ಗುಂ ಕೈಗಾರಿಕಾ ಅಭಿವೃದ್ಧಿ ಪ್ರದೇಶಕ್ಕೆ ಭೂಸ್ವಾಧೀನ ಹೊಂದಿದ್ದು, 7-00 ಎಕರೆ ಜಮೀನು ಮಂಜೂರಿದಾರರ ಹೆಸರಿನಲ್ಲಿ ಪಹಣಿ ಇರುತ್ತದೆ. ಸರ್ಕಾರಿ ಖರಾಬು 33-39 ಎ/ಗುಂ ಜಮೀನಿನ ಪಹಣಿ ಇರುತ್ತದೆ. ಸದರಿ ಸ.ನಂ.ನಲ್ಲಿ 2-00 ಎಕರೆ ಜಮೀನು ಅಕ್ರಮವಾಗಿ ಖಾತೆ ಮಾಡಿರುವುದು ಕಂಡುಬಂದಿರುವುದಿಲ್ಲ. |
| (ಆ) | ಬಂದಿದ್ದಲ್ಲಿ, ಈ ಜಾಗವನ್ನು ವಶಪಡಿಸಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಅನ್ವಯಿಸುವುದಿಲ್ಲ. |

**ಸಂ: ಕಂಇ 267 ಟಿಆರ್‌ಎಂ 2024 (1617958)**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು